## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2167

ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ

ಉತ್ತರಿಸುವ ದಿನಾಂಕ : 18-03-2022

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
| --- | --- | --- |
| ಅ) | ಸಮಾಜ ಕಲ್ಯಾಣ ಇಲಾಖೆಯಡಿ ಕ್ರೈಸ್ಟ್ ವತಿಯಿಂದ ನಡೆಸುತ್ತಿರುವ ವಿವಿಧ ವಸತಿ ನಿಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಶಿಕ್ಷಕರನ್ನು ಖಾಯಂ ಮಾಡುವಂತೆ ಮಾನ್ಯ ಉಚ್ಚನ್ಯಾಯಾಲಯದ ನಿರ್ದೇಶನ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಂಘದ ಅಡಿಯಲ್ಲಿ 826 (ಪರಿಶಿಷ್ಟ ಜಾತಿ 503, ಪರಿಶಿಷ್ಟ ವರ್ಗ-156, ಹಿಂದುಳಿದ ವರ್ಗ-167). ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.<br><br>ಸಂಘದ ಅಧೀನದಲ್ಲಿನ ವಸತಿ ಶಾಲೆ/ ಕಾಲೇಜುಗಳಲ್ಲಿ ಒಟ್ಟು 2,213 ಅತಿಥಿ ಶಿಕ್ಷಕರು/ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು WP No: 52876/2018 & 1412-1546/2019, WP No: 12562-12564/2018, WP No 46240/2018, WP No 45714-45716/ 2018, ಗಳಲ್ಲಿ ಅತಿಥಿ ಶಿಕ್ಷಕರು/ ಉಪನ್ಯಾಸಕರು ಪ್ರಕರಣ ದಾಖಲಿಸಿರುತ್ತಾರೆ. ಪ್ರಕರಣವನ್ನು ಆಲಿಸಿದ ಮಾನ್ಯ ನ್ಯಾಯಾಲಯವು ಈ ಕೆಳಕಂಡಂತೆ ಅಂತಿಮ ಆದೇಶವನ್ನು ನೀಡಿರುತ್ತದೆ.<br><br>"The third respondent is directed to consider the representation of the petitioners strictly in accordance with law. The writ petitions stand disposed off accordingly. The interim order granted earlier shall stand dissolved". |

| | | |
|---|---|---|
| | | ಮಾನ್ಯ ನ್ಯಾಯಾಲಯದ ಆದೇಶದಂತೆ ಅತಿಥಿ ಶಿಕ್ಷಕರ ಮನವಿಗಳನ್ನು ಪರಿಶೀಲಿಸಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅತಿಥಿ ಶಿಕ್ಷಕರನ್ನು ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ ಎಂದು ಹಿಂಬರಹವನ್ನು ನೀಡಲಾಗಿರುತ್ತದೆ.<br><br>ಆದ್ದರಿಂದ ಅತಿಥಿ ಶಿಕ್ಷಕರನ್ನು ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಶಿಕ್ಷಕರುಗಳನ್ನು ಖಾಯಂ ಮಾಡುವಲ್ಲಿ ಆಗಿರುವ ವಿಳಂಬಕ್ಕೆ ಕಾರಣಗಳೇನು; | |
| ಇ) | ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರ ರೂಪಿಸಿರುವ ರೂಪುರೇಷೆಗಳೇನು; | ಉದ್ಭವಿಸುವುದಿಲ್ಲ. |
| ಈ) | ಯಾವ ಕಾಲಮಿತಿಯಲ್ಲಿ ಕ್ರೈಸ್ಟ್ ಶಾಲೆಯ ಅತಿಥಿ ಶಿಕ್ಷಕರಗಳನ್ನು ಖಾಯಂಗೊಳಿಸಲಾಗುವುದು? | |

ಸಕಇ 177 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು .